ಲಿಖಿತ ಮೂಲಕ ಉತ್ತರಿಸುವ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಗುರುವಾರ, ದಿನಾಂಕ : 19 ನೇ ಮಾರ್ಚ್, 2020

ರಾಜ್ಯದಲ್ಲಿರುವ ಉದ್ಯಮಗಳಿಗೆ ಉತ್ತೇಜನ ನೀಡುವ ಬಗ್ಗೆ

ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು) :-

1217 (1445) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ದೇಶ ಮತ್ತು ರಾಜ್ಯದಲ್ಲಿರುವ ಮಧ್ಯಮ ಪ್ರಮಾಣದ ಉದ್ಯಮಗಳು, ಸೂಕ್ಷ್ಮ, ಮಧ್ಯಮ ಮತ್ತು ಸಣ್ಣ ಉದ್ಯಮಗಳ (ಒSಒಇ) ಬೆನ್ನೆಲುಬಾಗಿ ರೂಪುಗೊಳ್ಳುತ್ತಿರುವುದು ನಿಜವೇ ;

(ಆ) ಇತ್ತೀಚಿನ ವರ್ಷಗಳಲ್ಲಿ ನಮ್ಮ ದೇಶದ ನೆರೆ ರಾಷ್ಟ್ರಗಳಾದ ಚೀನಾ, ವಿಯೆಟ್ನಾಂ ಮತ್ತು ಬಾಂಗ್ಲಾದೇಶದಂತಹ ದೇಶಗಳು ಬಹುತೇಕವಾಗಿ ಸುಲಭ ದರದಲ್ಲಿ ಮತ್ತು ತಕ್ಷಣದಲ್ಲಿ ದೊರೆಯುವ ದುಡಿಮೆದಾರರ ಶಕ್ತಿಯನ್ನು ಬಳಸಿ ಮಧ್ಯಮ ಮಾರುಕಟ್ಟೆಯಲ್ಲಿ ರಫ್ತು ಮಾಡುವ ಉದ್ದೇಶದಿಂದ ಮಧ್ಯಮ ಪ್ರಮಾಣದ ಉದ್ಯಮಗಳಿಗೆ ಉತ್ತೇಜನ ನೀಡಿ ವಿಶ್ವ ಮಾರುಕಟ್ಟೆಯಲ್ಲಿ ರಫ್ತು ಪಾಲನ್ನು ಹೆಚ್ಚಿಸಲು ಕ್ರಮ ಕೈಗೊಂಡಿರುವುದು ನಿಜವೇ ;

(ಇ) ರಾಜ್ಯದಲ್ಲಿ ತನ್ನ ರಫ್ತು ಪಾಲನ್ನು ಹೆಚ್ಚಿಸಲು ಮಧ್ಯಮ ಪ್ರಮಾಣದ ಉದ್ಯಮಗಳನ್ನು ಉತ್ತೇಜನ ನೀಡಲು ಸರ್ಕಾರ ಯೋಚಿಸುತ್ತಿದೆಯೇ; ಹಾಗಿದ್ದಲ್ಲಿ, ಸಂಪೂರ್ಣ ಮಾಹಿತಿ ನೀಡುವುದು ;

(ಈ) ರಾಜ್ಯದಲ್ಲಿ (MSME) ಗಳಿಗೆ ರಾಜ್ಯ ಸರ್ಕರ ನೀಡಿರುವ ಪ್ರಸ್ತಾವಿತ ತೆರಿಗೆ ವಿನಾಯಿತಿಗಳ ಬಗ್ಗೆ ವಿವರ ನೀಡುವುದು ;

(ಉ) ಸೂಕ್ಷ್ಮ ಸಣ್ಣ ಮತ್ತು ಮಧ್ಯಮ ಕಂಪನಿಗಳು ತ್ರೈಮಾಸಿಕವಾಗಿ ಜಿ.ಎಸ್.ಟಿ ಗಳನ್ನು ಪಾವತಿಸಲು ರಾಜ್ಯ ಸರ್ಕಾರ ಮುಂದಾಗುವುದೇ ?